# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1090

ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ :18.12.2024

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹೆಬ್ಬಾಳ ಬಸ್ ನಿಲ್ದಾಣದಿಂದ ಹೊರಡುವ ಬಿ.ಎಂ.ಟಿ.ಸಿ ಬಸ್‌ಗಳು ನಿಗದಿತ ಮಾರ್ಗಗಳನ್ನು ಬಿಟ್ಟು ಸೆಂಟ್ರಲ್ ಎಕ್ಸೈಸ್ ಲೇಔಟ್ 1ನೇ ಮುಖ್ಯರಸ್ತೆಯ ಜನವಸತಿ ಪ್ರದೇಶದಲ್ಲಿ ಸಂಚರಿಸುತ್ತಿದ್ದು, ಇಲ್ಲಿನ ನಿವಾಸಿಗಳು ಬೆಳಗ್ಗೆ ಹಾಗೂ ಸಂಜೆ ಈ ರಸ್ತೆಯಲ್ಲಿ ವಾಕಿಂಗ್ ಮಾಡುವುದರಿಂದ ಅಪಘಾತಗಳು ಸಂಭವಿಸಿ ಸ್ಕಿಪ್ ಆಗಿರುವ ಬಸ್ ನಿಲ್ದಾಣಗಳಲ್ಲಿ ಬಸ್ಸುಗಳಿಗಾಗಿ ಕಾಯುವ ಜನರಿಗೂ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೆಬ್ಬಾಳ ಬಸ್ ನಿಲ್ದಾಣದಿಂದ ಭೂಪಸಂದ್ರ, ಆರ್.ಎಂ.ವಿ 2ನೇ ಹಂತ, ಅಯ್ಯಪ್ಪ ಬೇಕರಿ, ನಾಗಶೆಟ್ಟಿಹಳ್ಳಿ ಮಾರ್ಗವಾಗಿ ಮುಂದಕ್ಕೆ ನಿಗದಿತ ಮಾರ್ಗ್ಗದಲ್ಲಿಯೇ ಆಚರಣೆಗೊಳಿಸುತ್ತಿರುವುದರಿಂದ, ಯಾವುದೇ ತೊಂದರೆಯಾಗಿರುವುದಿಲ್ಲ. |
| ಆ) | ಭೂಪಸಂದ್ರ ಬಸ್ ನಿಲ್ದಾಣದಿಂದ ಹೊರಡುವ ಬಿಎಂಟಿಸಿ ಬಸ್‌ಗಳು ನಿಗದಿತ ಮಾರ್ಗಗಳನ್ನು ಬಿಟ್ಟು ಕಲ್ಪನಾ ಚಾವ್ಲಾ ರಸ್ತೆಯ ಜನವಸತಿ ಪ್ರದೇಶಕ್ಕೆ ಪ್ರವೇಶಿಸಿ ನಿವಾಸಿಗಳಿಗೆ ತೊಂದರೆ ಮತ್ತು ಅಪಘಾತಗಳ ಅಪಾಯವನ್ನುಂಟು ಮಾಡುತ್ತಿರುವುದಲ್ಲದೇ, ಸ್ಕಿಪ್ ಆಗಿರುವ ಬಸ್ ನಿಲ್ದಾಣಗಳಲ್ಲಿ ಬಸ್ಸಳಿಗಾಗಿ ಕಾಯುವ ಜನರಿಗೂ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಭೂಪಸಂದ್ರದಿಂದ ಆರ್.ಎಂ.ವಿ 2ನೇ ಹಂತ, ಅಯ್ಯಪ್ಪ ಬೇಕರಿ, ನಾಗಶೆಟ್ಟಿಹಳ್ಳಿ ಮಾರ್ಗವಾಗಿ ಮುಂದಕ್ಕೆ ನಿಗದಿತ ಮಾರ್ಗದಲ್ಲಿಯೇ ಆಚರಣೆಗೊಳಿಸುತ್ತಿರುವುದರಿಂದ, ಯಾವುದೇ ತೊಂದರೆಯಾಗಿರುವುದಿಲ್ಲ. |
| ಇ) | ಪ್ರತಿ ರಾತ್ರಿ ಹೆಬ್ಬಾಳ ಹೊಸ ಪೊಲೀಸ್ ಠಾಣೆ ಎದುರು ಬಿಎಂಟಿಸಿ ಬಸ್‌ಗಳು ಸಂಪೂರ್ಣ ರಸ್ತೆಯನ್ನು ಆಕ್ರಮಿಸಿಕೊಂಡು ಇತರೆ ವಾಹನ ಸವಾರರಿಗೆ ತೊಂದರೆ ನೀಡುತ್ತಿದ್ದು, ಸದರಿ ಬಸ್ಸುಗಳನ್ನು ನಿಗದಿತ ಸ್ಥಳಗಳಲ್ಲಿ ನಿಲುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪ್ರಸ್ತುತ ಹೆಬ್ಬಾಳ ಜಂಕ್ಷನ್‌ನಲ್ಲಿ ಮೇಲ್ಸೇತುವೆ ಕಾಮಗಾರಿ ನಡೆಯುತ್ತಿರುವುದರಿಂದ ಸಂಸ್ಥೆಯ ಬಸ್ಸುಗಳ ನಿಲುಗಡೆಗೆ ಸೂಕ್ತ ಸ್ಥಳಾವಕಾಶದ ಕೊರತೆಯಿರುತ್ತದೆ. ಆದಾಗ್ಯೂ ಹೆಬ್ಬಾಳ ಹೊಸ ಪೊಲೀಸ್ ಠಾಣೆ ಎದುರು ರಾತ್ರಿ ತಂಗುವ ಸಂಸ್ಥೆಯ ಬಸ್ಸುಗಳನ್ನು ವ್ಯವಸ್ಥಿತವಾಗಿ ಇತರೆ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ಅನಾನುಕೂಲವಾಗದಂತೆ ನಿಲುಗಡೆಗೊಳಿಸಲು ಕ್ರಮ ವಹಿಸಲಾಗಿದೆ. |

ಸಂಖ್ಯೆ: ಟಿಡಿ 254 ಟಿಸಿಕ್ಯೂ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು